9) ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕ, 2010
10) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕ, 2010
11) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ವಿಧೇಯಕ, 2010

7. ಕರ್ನಾಟಕ ವಿಧಾನ ಮಂಡಲದ ಮತ್ತು ವಿಧಾನಸಭೆಯ ಸಮಿತಿಗಳ ಪುನರ್ ರಚನೆ ಬಗ್ಗೆ ಪ್ರಸ್ತಾವನೆ

ಶ್ರೀ ಎಸ್. ಸುರೇಶ್ ಕುಮಾರ್(ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ನಗರಾಭಿವೃದ್ಧಿ ಸಚಿವರು): ಮಾನ್ಯ ಅಧ್ಯಕ್ಷರೆ, ದಿನಾಂಕ: 28-09-2010ರಂದು ವಿಧಾನಮಂಡಲದ ಹಾಗೂ ವಿಧಾನಸಭೆಯ ವಿವಿಧ ಸಮಿತಿಗಳ ಕಾಲಾವಧಿ ಮುಗಿಯಲಿದ್ದು, 2010-11ನೇ ಸಾಲಿಗೆ ಸಮಿತಿಗಳನ್ನು ಪುನರ್‌ರಚಿಸಲು ಮಾನ್ಯ ಸಭಾಧ್ಯಕ್ಷರಿಗೆ ಪೂರ್ಣ ಅಧಿಕಾರವನ್ನು ಈ ಸದನವು ನೀಡಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಮಂಡಿಸಿರುವ ಪ್ರಸ್ತಾವನೆಗೆ ಸದನದ ಸಹಮತಿ ಇದೆಯೆಂದು ಭಾವಿಸುತ್ತೇನೆ.

(ಗೊಂದಲ)

8. ಅಧ್ಯಕ್ಷರ ಅಪ್ಪಣೆ ಮೇರೆಗೆ:

ವಿಷಯ: ಕರ್ನಾಟಕ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರಾದ ಶ್ರೀಮತಿ ಮೋಟಮ್ಮನವರ ವಿರುದ್ಧ ಹಕ್ಕುಚ್ಯುತಿ ಪ್ರಸ್ತಾವ.

ಶ್ರೀ ಎಂ.ಪಿ. ಅಪ್ಪಚ್ಚು ರಂಜನ್(ಮಡಿಕೇರಿ): ವಿಧಾನಸಭೆಯ ಅಧ್ಯಕ್ಷರ ಮೇಲೆ ವಿಧಾನಪರಿಷತ್ತಿನ, ಮೇಲ್ಮನೆಯ ವಿರೋಧ ಪಕ್ಷದ ನಾಯಕಿಯಾದ ಶ್ರೀಮತಿ ಮೋಟಮ್ಮನವರ ಹಕ್ಕುಚ್ಯುತಿ ಮಾಡಿದ್ದಾರೆಂದು ಹೇಳುವುದಕ್ಕೆ ಇಷ್ಟಪಡುತ್ತೇನೆ. ಅಧ್ಯಕ್ಷರ ಈ ಸ್ಥಾನ ಬಹಳ ಉನ್ನತವಾದ ಸ್ಥಾನ. ಅಧ್ಯಕ್ಷರು ಯಾರೇ ಇರಲಿ, ಇವತ್ತು ತಾವಿರಬಹುದು, ನಾಳೆ ಇನ್ನೊಬ್ಬರು ಬರಬಹುದು. ಇದುವರೆಗೆ ಬಹಳಷ್ಟು ವಿಧಾನಸಭೆಯ ಅಧ್ಯಕ್ಷರುಗಳು ಬಂದು ಹೋಗಿದ್ದಾರೆ. ಅಧ್ಯಕ್ಷರ ಮತ್ತು ಅವರ ನಿರ್ಣಯಕ ಬಗ್ಗೆ ಮೇಲ್ಮನೆಯ ವಿರೋಧ ಪಕ್ಷದ ನಾಯಕಿಯಾದ ಶ್ರೀಮತಿ ಮೋಟಮ್ಮನವರು ಅಗೌರವದ ರೀತಿಯಲ್ಲಿ

ಮಾತನಾಡಿರುವುದು ಪತ್ರಿಕೆಯಲ್ಲಿ ಬಂದಿದೆ. ಆದ್ದರಿಂದ ದಯವಿಟ್ಟು ಇದರ ಬಗ್ಗೆ ಹಕ್ಕುಚ್ಯುತಿ ಮಂಡನೆಗೆ ನನಗೆ ಅವಕಾಶ ಕೊಡಬೇಕೆಂದು ತಮ್ಮಲ್ಲಿ ವಿನಂತಿಸಿಕೊಳ್ಳುತ್ತೇನೆ.

ಅಧ್ಯಕ್ಷರು: ಮಾನ್ಯ ಅಪ್ಪಚ್ಚು ರಂಜನ್‌ರವರು ಪ್ರಸ್ತಾಪಿಸಿದ ವಿಚಾರವನ್ನು ವಿಧಾನಪರಿಷತ್ತಿನ ಮಾನ್ಯ ಸಭಾಪತಿಯವರಿಗೆ ಕಳುಹಿಸಿ ಪರಿಶೀಲನೆ ಮಾಡಿ ಮುಂದಿನ ಕ್ರಮ ಕೈಗೊಳ್ಳಲಾಗುವುದು.

(ಗೊಂದಲ)

ಅಧ್ಯಕ್ಷರು: ಸಹಕರಿಸಿದ ಎಲ್ಲಾ ಸದಸ್ಯರಿಗೆ ಧನ್ಯವಾದಗಳನ್ನು ಹೇಳಿ ಈಗ ಅನಿರ್ದಿಷ್ಟ ಕಾಲಾವಧಿಗೆ ಸದನವನ್ನು ಮುಂದೂಡುತ್ತಿದ್ದೇನೆ.

(ಸದನವು ಮಧ್ಯಾಹ್ನ 3 ಗಂಟೆ 3 ನಿಮಿಷಕ್ಕೆ ಅನಿರ್ದಿಷ್ಟ ಅವಧಿಯವರೆಗೆ ಮುಂದೂಡಲ್ಪಟ್ಟಿತು.)

ಅನುಬಂಧ–I

ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2010

(2010ರ ವಿಧಾನ ಪರಿಷತ್ತಿನ ವಿಧೇಯಕ ಸಂಖ್ಯೆ 03)

(ವಿಧಾನ ಪರಿಷತ್ತಿನಲ್ಲಿ ಅಂಗೀಕಾರವಾದ ರೂಪದಲ್ಲಿ)

ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ನ್ನು (1993ರ ಕರ್ನಾಟಕ ಅಧಿನಿಯಮ 14) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು, ಭಾರತ ಗಣರಾಜ್ಯದ ಅರವತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ: (1) ಈ ಅಧಿನಿಯಮವನ್ನು **ಕರ್ನಾಟಕ ಪಂಚಾಯತ್ ರಾಜ್ಯ (ತಿದ್ದುಪಡಿ) ಅಧಿನಿಯಮ, 2010** ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

2. 2ನೇ ಪ್ರಕರಣದ ತಿದ್ದುಪಡಿ.– ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ರ (1993ರ ಕರ್ನಾಟಕ ಅಧಿನಿಯಮ 14) (ಇಲ್ಲಿ ಇನ್ನು ಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 2ನೇ ಪ್ರಕರಣದಲ್ಲಿ, (28)ನೇ ಖಂಡದ ತರುವಾಯ, ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ: